# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1184
2. ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಸಿ.ಟಿ.ರವಿ (ವಿಧಾನ ಸಭೆಯಿಂದ ಚುನಾಯಿತರಾದವರು)
3. ಉತ್ತರಿಸುವ ದಿನಾಂಕ : 21.08.2025
4. ಉತ್ತರಿಸುವ ಸಚಿವರು : ಗೃಹ ಸಚಿವರು.

<table>
<tr><th>ಕ್ರಮ ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>(ಅ)</td><td>ರಾಜ್ಯಾದ್ಯಂತ ಡ್ರಗ್ಸ್ ಪೂರೈಕೆ ಮತ್ತು ಮಾರಾಟ ಜಾಲ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ರಾಜ್ಯದಲ್ಲಿ ಡ್ರಗ್ಸ್ ಪೂರೈಕೆ ಮತ್ತು ಮಾರಾಟಕ್ಕೆ ಸಂಬಂಧಿಸಿದಂತೆ ಎನ್.ಡಿ.ಪಿ.ಎಸ್ ಕಾಯ್ದೆ-1985ರಡಿ ಪ್ರಕರಣಗಳು ದಾಖಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.</td></tr>
<tr><td>(ಆ)</td><td>ಕಳೆದ ಎರಡು ವರ್ಷಗಳಿಂದ ಪತ್ತೆಯಾಗಿರುವ ಪ್ರಕರಣಗಳೆಷ್ಟು; ಎಫ್.ಐ.ಆರ್ ದಾಖಲಾದ ಪ್ರಕರಣ ಗಳೆಷ್ಟು; ಬಂಧಿತರ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರವನ್ನು ಪ್ರಕರಣವಾರು ನೀಡುವುದು)</td><td>ರಾಜ್ಯದಲ್ಲಿ ಕಳೆದ ಎರಡು ವರ್ಷಗಳಲ್ಲಿ ಡ್ರಗ್ಸ್ ಪೂರೈಕೆ ಮತ್ತು ಮಾರಾಟಕ್ಕೆ ಸಂಬಂಧಿಸಿದಂತೆ ಎನ್.ಡಿ.ಪಿ.ಎಸ್ ಕಾಯ್ದೆ-1985ರಡಿ ದಾಖಲಾಗಿರುವ ಪ್ರಕರಣಗಳ ಸಂಖ್ಯೆ ಮತ್ತು ಬಂಧಿಸಿರುವ ಆರೋಪಿಗಳ ಸಂಖ್ಯೆ ಈ ಕೆಳಕಂಡಂತಿದೆ:-<br><table><tr><th>ವರ್ಷ</th><th>ಎಫ್ಐಆರ್ ದಾಖಲಾದ ಮತ್ತು ಪತ್ತೆಯಾದ ಪ್ರಕರಣಗಳ ಸಂಖ್ಯೆ</th><th>ಬಂಧಿತರ ಸಂಖ್ಯೆ</th></tr><tr><td>2023</td><td>6767</td><td>6337</td></tr><tr><td>2024</td><td>4188</td><td>3293</td></tr><tr><td>2025 (ಜುಲೈ)</td><td>3530</td><td>1435</td></tr></table><br>ಜಿಲ್ಲಾವಾರು ವಿವರವನ್ನು ಅನುಬಂಧ ದಲ್ಲಿ ಒದಗಿಸಿದೆ.</td></tr>
<tr><td>(ಇ)</td><td>ಡ್ರಗ್ಸ್ ಹಾವಳಿ ಮಟ್ಟಹಾಕಲು ರಚಿಸಿರುವ ಕಾರ್ಯಪಡೆ ಎಷ್ಟು ಬಾರಿ ಸಭೆ ನಡೆಸಿವೆ; ಕಾರ್ಯಪಡೆ ವರದಿಯಲ್ಲಿನ ಶಿಫಾರಸ್ಸುಗಳು ಯಾವುವು; ಕಾರ್ಯಪಡೆ ರಚನೆ ನಂತರ ಡ್ರಗ್ಸ್ ಹಾವಳಿ ಹತೋಟಿಗೆ ಬಂದಿದೆಯೇ; (ವಿವರ ನೀಡುವುದು)</td><td>ರಾಜ್ಯದಲ್ಲಿ ಮಾದಕ ವಸ್ತುಗಳ ನಿಯಂತ್ರಣ ಕುರಿತಂತೆ ಸರ್ಕಾರದ ಆದೇಶ ಸಂಖ್ಯೆ: ಹೆಚ್‌ಡಿ/ 141/ ಪಿಎಪಿ/ 2025, ದಿನಾಂಕ: 02.08.2025 ರಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಪೊಲೀಸ್ ಠಾಣೆಗಳಲ್ಲಿ ನಾರ್ಕೋಟಿಕ್ಸ್ ಸಂಬಂಧ ದಾಖಲಾಗುವ ಪ್ರಕರಣಗಳ ಮೇಲ್ವಿಚಾರಣೆಗಾಗಿ ಮಾದಕ ವಸ್ತುಗಳ ವಿರೋಧಿ ಕಾರ್ಯಪಡೆ (Anti Narcotics Task Force) ಘಟಕವನ್ನು ಡಿಜಿ ಮತ್ತು ಐಜಿಪಿ ಇವರ ಅಧೀನದಲ್ಲಿ ಸೃಜಿಸಲಾಗಿದೆ. ಈ ಕಾರ್ಯಪಡೆಯು ರಚನೆಯಾಗಿ 12 ದಿನಗಳಾಗಿದೆ.</td></tr>
<tr><td>(ಈ)</td><td>ಮೈಸೂರಿನಲ್ಲಿ ದೊಡ್ಡ ಮಟ್ಟದ ಡ್ರಗ್ಸ್ ಫ್ಯಾಕ್ಟರಿಯನ್ನು ಹೊರ ರಾಜ್ಯದ ಪೊಲೀಸರು ಬೇಧಿಸಿರುವುದು ರಾಜ್ಯ ಸರ್ಕಾರದ ಗಮನದಲ್ಲಿದೆಯೇ; ಇಷ್ಟು ದೊಡ್ಡ ಮಟ್ಟದ ಡ್ರಗ್ಸ್ ದಂಧೆ ನಡೆಯುತ್ತಿದರೂ ರಾಜ್ಯದ ಪೊಲೀಸರು ಪತ್ತೆ ಹಚ್ಚಲು ವಿಫಲವಾಗಲು ಕಾರಣಗಳೇನು; ಈ ಪ್ರಕರಣದಲ್ಲಿ ಯಾವ ಅಧಿಕಾರಿಗಳ ವಿರುದ್ಧ ಸರ್ಕಾರ ಏನು ಕ್ರಮ ಕೈಗೊಂಡಿದೆ;</td><td>ಮೈಸೂರಿನಲ್ಲಿ ದೊಡ್ಡ ಮಟ್ಟದ ಡ್ರಗ್ಸ್ ಫ್ಯಾಕ್ಟರಿಯನ್ನು ಹೊರ ರಾಜ್ಯದ ಪೊಲೀಸರು ಬೇಧಿಸಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಮೈಸೂರು ನಗರ ಪೊಲೀಸ್ ಹಾಗೂ ಮುಂಬೈ ಪೊಲೀಸರ ಜಂಟಿ ಕಾರ್ಯಚರಣೆ ನಡೆಸಿ ಮಾದಕ ವಸ್ತು ತಯಾರಿಸುವ ಘಟಕವನ್ನು ಪತ್ತೆ ಮಾಡಲಾಗಿದೆ. ಸದರಿ ಘಟನೆಗೆ ಸಂಬಂಧಿಸಿದಂತೆ ಬೀಟ್ ಹಾಗೂ ಗುಪ್ತ ಮಾಹಿತಿ ಸಂಗ್ರಹಿಸುವ ಸಿಬ್ಬಂದಿಗಳು ಮಾಹಿತಿ ಸಂಗ್ರಹಿಸುವಲ್ಲಿ ವಿಫಲತೆ ಹೊಂದಿರುವುದರಿಂದ ಇವರುಗಳನ್ನು ಅಮಾನತ್ತುಗೊಳಿಸಲಾಗಿದೆ.</td></tr>
</table>

| | | |
|---|---|---|
| (ಉ) | ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಡ್ರಗ್ಸ್ ಹಾವಳಿಯನ್ನು ತಡೆಯಲು ವಿಫಲರಾದ ಎಷ್ಟು ಪೊಲೀಸ್ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ; ಡ್ರಗ್ಸ್ ಹಾವಳಿಯನ್ನು ಪೂರ್ಣವಾಗಿ ತೊಡೆದುಹಾಕಲು ರೂಪಿಸಿರುವ ಕಾರ್ಯಯೋಜನೆಗಳಾವುವು? | ರಾಜ್ಯದ ಪೊಲೀಸ್ ಠಾಣೆಗಳ ವ್ಯಾಪ್ತಿಯಲ್ಲಿ ಡ್ರಗ್ಸ್ ಹಾವಳಿಯನ್ನು ತಡೆಯಲು ವಿಫಲರಾದ ಮಂಗಳೂರು ನಗರದಲ್ಲಿನ 6 ಪೊಲೀಸ್ ಅಧಿಕಾರಿಗಳನ್ನು ಮತ್ತು ಮೈಸೂರು ನಗರದಲ್ಲಿ 2 ಪೊಲೀಸ್ ಸಿಬ್ಬಂದಿಗಳನ್ನು ಒಟ್ಟು 8 ಪೊಲೀಸ್ ಅಧಿಕಾರಿ/ಸಿಬ್ಬಂದಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ.<br><br>**ಮಾದಕ ಮುಕ್ತ ರಾಜ್ಯವನ್ನಾಗಿ ಮಾಡಲು ಸರ್ಕಾರವು ತೆಗೆದುಕೊಂಡ ಕ್ರಮಗಳು ಈ ಕೆಳಕಂಡಂತಿದೆ:-**<br><br>➢ ರಾಜ್ಯದಲ್ಲಿ ಮಾದಕ ವಸ್ತುಗಳ ನಿಯಂತ್ರಣ ಕುರಿತಂತೆ, ಸರ್ಕಾರದ ಆದೇಶ ಸಂಖ್ಯೆ: ಹೆಚ್‌ಡಿ/141/ಪಿಓಪಿ/2025 ದಿನಾಂಕ: 02/08/2025ರಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಪೊಲೀಸ್ ಠಾಣೆಗಳಲ್ಲಿ ನಾರ್ಕೋಟಿಕ್ಸ್ ಸಂಬಂಧ ದಾಖಲಾಗುವ ಪ್ರಕರಣಗಳ ಮೇಲ್ವಿಚಾರಣೆಗಾಗಿ ಮಾದಕ ವಸ್ತುಗಳ ವಿರೋಧಿ ಕಾರ್ಯಪಡೆ (Anti Narcotics Task Force) ಘಟಕವನ್ನು ಸೃಜಿಸಲಾಗಿದೆ. ಈ ಕಾರ್ಯ ಪಡೆಯು ದಿನಾಂಕ:02.08.2025 ರಂದು ರಚನೆಯಾಗಿರುತ್ತದೆ.<br><br>➢ ಮಾದಕ ಬೆಳೆಗಳ ಗುರುತಿಸುವಿಕೆ ಮತ್ತು ನಾಶ, ಅಕ್ರಮ ಮಾದಕ ವ್ಯಸನವನ್ನು ಪತ್ತೆ ಹಚ್ಚಲು ಮತ್ತು ನಿರ್ಮೂಲನೆ ಮಾಡಲು ರಾಜ್ಯಾದ್ಯಂತ ಪೊಲೀಸ್ ಸಿಬ್ಬಂದಿಗೆ NCB (ನಾರ್ಕೋಟಿಕ್ಸ್ ಕಂಟ್ರೋಲ್ ಬ್ಯೂರೋ) ಆನ್‌ಲೈನ್ ಕಾರ್ಯಗಾರಗಳ ಮೂಲಕ ತರಬೇತಿ ನೀಡಲಾಗುತ್ತಿದೆ. ಈ ಉದ್ದೇಶಕ್ಕಾಗಿ NCB ಮೊಬೈಲ್ ಅಪ್ಲಿಕೇಶನ್/ವೆಬ್ ಪೋರ್ಟಲ್ MAPDRUGS ಅನ್ನು ಸಹ ಪರಿಚಯಿಸಲಾಗಿದೆ.<br><br>➢ ಮಾದಕವಸ್ತು ಸಂಬಂಧಿತ ಪ್ರಕರಣಗಳಲ್ಲಿ ರಾಜ್ಯ ಪೊಲೀಸರ ತನಿಖಾ ಸಾಮರ್ಥ್ಯಗಳನ್ನು ಹೆಚ್ಚಿಸಲು NCB ಮತ್ತು ಇತರೆ ಏಜೆನ್ಸಿಗಳ ಸಹಯೋಗದೊಂದಿಗೆ ಆರು ಕಾರ್ಯಾಗಾರಗಳನ್ನು ಆಯೋಜಿಸಲಾಗಿದೆ. ಉಪ ಅಧೀಕ್ಷಕರವರಿಗೆ (ಡಿವೈಎಸ್ಪಿ), ಪೊಲೀಸ್ ನಿರೀಕ್ಷಕರು ಮತ್ತು ಅಬಕಾರಿ ಅಧಿಕಾರಿಗಳಿಗೆ ವಿಶೇಷ ತರಬೇತಿಯನ್ನು ನೀಡಲಾಗಿರುತ್ತದೆ. ಮತ್ತಷ್ಟು ಸಾಮರ್ಥ್ಯ ನಿರ್ಮಾಣ ಕಾರ್ಯಾಗಾರಗಳನ್ನು ಯೋಜಿಸಲಾಗಿದೆ.<br><br>➢ ತರಬೇತಿ ಕಾರ್ಯಕ್ರಮಗಳು:- ಸಿಐಡಿ ಅಧಿಕಾರಿಗಳನ್ನು ಭೋಪಾಲ್ ನಲ್ಲಿರುವ ಸೆಂಟ್ರಲ್ ಅಕಾಡೆಮಿ ಫಾರ್ ಪೊಲೀಸ್ ಟ್ರೈನಿಂಗ್ (ಸಿಎಪಿಟಿ) ತರಬೇತುದಾರರಿಗಾಗಿ ತರಬೇತಿ (TOT) ಹಾಗೂ ಮಾದಕ ದ್ರವ್ಯ ತನಿಖೆಯ ಮೇಲೆ ಕೇಂದ್ರೀಕರಿಸಿದ ಕಾರ್ಯಕ್ರಮಗಳಿಗೆ ಕಳುಹಿಸಲಾಗಿದೆ. NDPS ಕಾಯ್ದೆ (Narcotic Drugs and Psychotropic Substances Act-1985) ಕುರಿತು ಇತರ ಸಿಬ್ಬಂದಿಗೆ ಪೊಲೀಸ್ ತರಬೇತಿ ಶಾಲೆಗಳಲ್ಲಿ ಇದೇ ರೀತಿಯ ತರಬೇತಿಯನ್ನು ನೀಡಲಾಗುತ್ತಿದೆ.<br><br>➢ ಬೆಂಗಳೂರು ಪೊಲೀಸರು ಅಕ್ರಮ ಮಾದಕ ದ್ರವ್ಯ ಚಟುವಟಿಕೆಗಳಲ್ಲಿ ತೊಡಗಿರುವ ವಿದೇಶಿಗರು ವಾಸಿಸುವ ಪ್ರದೇಶಗಳ ಮೇಲೆ ಸೂಕ್ತ ನಿಗಾ ವಹಿಸಿ ಅಕ್ರಮ ಚಟುವಟಿಕೆ ಮೇಲೆ ನಿಯಂತ್ರಣ ಸಾಧಿಸಲಾಗಿದೆ.<br><br>➢ ಮಾದಕ ದ್ರವ್ಯ ಸೇವನೆ, ಮಾರಾಟ, ಸಂಗ್ರಹಣೆ ಮತ್ತು ಸರಬರಾಜು ಮಾಡುವವರ ವಿರುದ್ಧ ಕ್ರಮ ಕೈಗೊಳ್ಳುವ ಸಲುವಾಗಿ ಸಿಐಡಿ ಘಟಕದಲ್ಲಿ ವಿಶೇಷ ತರಬೇತಿ ನೀಡುವ ಸೌಲಭ್ಯವನ್ನು ಕಲ್ಪಿಸಲಾಗಿದೆ. ಈಗಾಗಲೇ ರಾಜ್ಯದಲ್ಲಿ 167 ಅಧಿಕಾರಿ/ಸಿಬ್ಬಂದಿಗಳಿಗೆ ತರಬೇತಿಯನ್ನು ನೀಡಲಾಗಿದೆ. |

| | | |
|---|---|---|
| | | ➢ ಜೂನ್ 26, 2025 ರಂದು "ಡ್ರಗ್ಸ್ ದುರುಪಯೋಗ ಮತ್ತು ಅಕ್ರಮ ಸಾಗಣಿಕೆ ವಿರುದ್ಧ ಅಂತರ ರಾಷ್ಟ್ರೀಯ ದಿನಾಚರಣೆ" ಅಂಗವಾಗಿ ಸುಮಾರು 4000 ಶಾಲಾ-ಕಾಲೇಜು ವಿದ್ಯಾರ್ಥಿಗಳಿಗೆ ತರಬೇತಿ ಕಾರ್ಯಗಾರ ಆಯೋಜಿಸಿ ತಿಳುವಳಿಕೆ ನೀಡಲಾಗಿದೆ.<br><br>➢ Drugs Free Karnataka Mobile App ಅನ್ನು ಅಭಿವೃದ್ಧಿಪಡಿಸಿ ಸಾರ್ವಜನಿಕರಲ್ಲಿ ಹಾಗೂ ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸಿ, ಮಾದಕವಸ್ತು ಬಳಕೆ, ಸಂಗ್ರಹಣೆ, ಸರಬರಾಜು ಮೇಲೆ ನಿಯಂತ್ರಣ ಸಾಧಿಸುವ ನಿಟ್ಟಿನಲ್ಲಿ ದಿಟ್ಟ ಕ್ರಮಕೈಗೊಳ್ಳಲಾಗುತ್ತಿದೆ.<br>➢ NDPS ಪ್ರಕರಣಗಳಲ್ಲಿನ ಆರೋಪಿಗಳ ಮಾಹಿತಿಯನ್ನು ಪೊಲೀಸ್ ಐಟಿ ತಂತ್ರಾಂಶ- National Integrated Database on Arrested Narco Offenders - NIDAAN ಪೋರ್ಟಲ್‌ನಲ್ಲಿ ದಾಖಲಿಸಿ ನಿರ್ವಹಿಸಲಾಗುತ್ತಿದೆ. ಆರೋಪಿಗಳ ದತ್ತಾಂಶ ವಿಶ್ಲೇಷಣೆ ಮಾಡಿ ಆರೋಪಿಗಳ ಚಲನವಲನಗಳ ಮೇಲೆ ನಿಗಾವಹಿಸಲಾಗಿದೆ.<br><br>➢ ರಾಜ್ಯ ಮತ್ತು ಜಿಲ್ಲಾ ಮಟ್ಟದಲ್ಲಿ NCORD (Narcotics Co- ordination) ಸಮಿತಿ ರಚನೆಗೊಂಡಿರುತ್ತದೆ. NDPS ಕಾಯ್ದೆ ಜಾರಿಗೊಳಿಸುವ ಸಂಬಂಧ ಇತರೆ ಇಲಾಖೆಯ ಸಮನ್ವಯದೊಂದಿಗೆ ಕ್ರಮ ಕೈಗೊಳ್ಳಲಾಗುತ್ತಿದೆ.<br><br>➢ ಎನ್.ಡಿ.ಪಿ.ಎಸ್ ಪ್ರಕರಣಗಳಲ್ಲಿ ಭಾಗಿಯಾಗುವ ವಿದೇಶಿ ಪ್ರಜೆಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಾಗುತ್ತಿದೆ. ಭಾಗಿಯಾಗುವ ಆರೋಪಿಗಳನ್ನು Passport Act-1920, Foreigners Act-1946 & Foreigners Order-1948ರ ಅಡಿಯಲ್ಲಿ ಗಡಿಪಾರು ಪ್ರಕ್ರಿಯೆ ಕೈಗೊಳ್ಳಲು ಕ್ರಮ ಜರುಗಿಸಲಾಗುತ್ತಿದೆ.<br><br>➢ PITNDPS-1988ರ ಕಾಯ್ದೆ ಅನ್ವಯವಾಗುವ ಆರೋಪಿಗಳ ವಿರುದ್ಧ ನಿಯಾಮಾನುಸಾರ ಬಂಧನ ಕ್ರಮ ಜರುಗಿಸಿ ಮಾನ್ಯ PITNDPS ಸಲಹಾ ಮಂಡಳಿಯ ಮುಂದೆ ಬಂಧಿತ ಆರೋಪಿಯನ್ನು ಹಾಜರುಪಡಿಸಿ, ಮಾನ್ಯ ಸಲಹಾ ಮಂಡಳಿಯ ವರದಿಯನ್ವಯ ಕ್ರಮ ಕೈಗೊಳ್ಳಲಾಗುತ್ತಿದೆ.<br><br>➢ ಡ್ರಗ್ಸ್ ದಂಧೆಯನ್ನು ಸಂಪೂರ್ಣ ಮಟ್ಟ ಹಾಕಲು ಮತ್ತು ಪೆಡ್ಲರ್‌ಗಳ ಆಸ್ತಿಯನ್ನು ಮುಟ್ಟುಗೋಲು ಹಾಕಿಕೊಳ್ಳಲು NDPS-1985/PITNDPS-1988 ರ ಕಾಯ್ದೆಗಳು ಮತ್ತು ನಿಯಮಗಳಡಿಯಲ್ಲಿ ಕಾನೂನು ಕ್ರಮ ಜರುಗಿಸಲಾಗುತ್ತಿದೆ. |

ಒಇ 52 ಪಿಎನ್‌ಡಿ 2025 (ಇ)

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು